8. 7ನೇ ಷರತ್ತಿನಲ್ಲಿ ನಮೂದಿಸಿರುವ ಮೇರೆ ಕರಾರ್‌ವಾಕಾ ಅಂಮದ್ ರಫ್ತು ಲೆಖ್ಕವನ್ನು ಇಡಲೋಸ್ಕರ ಒಬ್ಬಂದಿ ಅಂದರೆ ಒಬ್ಬ ಮುತ್ಸದ್ದಿಯ ಖರ್ಚನ್ನು ಕಂಟ್ರಾದಾರನೇ ವಹಿಸಬೇಕ್ಕು.

9. ಗವರ್ಮೆಂಟ್ ಟೋಲ್‌ಮನೆ ಮತ್ತು ಟೋಲ್‌ಗೇಟನ್ನು ಸಹ ಕಂಟ್ರಾದಾರನು ಉಪಯೋಗಿಸತಕ್ಕದ್ದು. ಮತ್ತು ಅವುಗಳನ್ನು ಪೂರಾ ದಾರಸ್ತಿನಲ್ಲಿ ಆತನು ಇಟ್ಟುಕೊಂಡಿರತಕ್ಕದ್ದು.

10. ಕಂಟ್ರಾಕ್ಟುದಾರನು ಪ್ರತಿ ಮಾಹೆ ಗುರ್ರೆ ತಾರೀಖಿನಲ್ಲಿ ಹಿಂದಲ ತಿಂಗಳ ಟೋಲ್ ವಸೂಲಿ ಲೆಖ್ಕವನ್ನು ಮಂಜರಾಬಾದ್ ತಾಲ್ಲೂಕು ಕಚೇರಿಗೆ ಕಳುಹಿಸತಕ್ಕದ್ದು.

11. ಕಂಟ್ರಾಕ್ಟುದಾರ ವಸೂಲ್ಮಾಡಬೇಕಾದ ದರಗಳ ತಖ್ತೆಲು ಈ ಕೆಳಗಿನ ಷೆಡ್ಯೂಲಿನಲ್ಲಿ ನಮೂದ್ಮಾಡಿ ಇದೆ.

		ರೂ	ಆ	ಪೈ
1	ಪ್ರತಿ ನಾಲ್ಕು ಚಕ್ರದ ಭಂಡಿಗೆ	2	0	0
2	ಡಿಟೋ ಎರಡು ಡಿಟೋ	1	0	0
3	ಪ್ರತಿ ಯಕ್ತಾ ಮೇಲು	0	4	0
4	ಸ್ಪ್ರಿಂಗ್‌ಯಾನೆ ಬಿಲ್ಲಿನ ಮೇಲೆ ಇರುವ ಬಾಡಿಗೆ ಭಂಡಿ ಪ್ರತಿ ಬಂದಕ್ಕೆ	0	2	0
5	ಎಂಟು ಎತ್ತುಗಳಿಂದ, ಕೋಣಗಳಿಂದ, ಕುದುರೆಗಳಿಂದ, ಟಾಕಣಗಳಿಂದ, ಕತ್ತೆಗಳಿಂದ ಯಾ ಹೇಸರು ಕತ್ತೆಗಳಿಂದ ಯಳೆಯಲ್ಪಟ್ಟ ಮತ್ತು ಬಿಲ್ಲಿನ ಮೇಲೆ ಇಲ್ಲದ ಪ್ರತಿ ಗಾಡಿ ವ ಬಾಡಿಗೆ ಭಂಡಿ ಬಂದಕ್ಕೆ	1	8	0
6	ಡಿಟೋ ಭರ್ತಿ ಇಲ್ಲದಿದ್ದರೆ	0	8	0
7	ಆರು ಎತ್ತುಗಳು ವಗೈರೆಗಳಿಂದ ಎಳೆಯಲ್ಪಟ್ಟ ಗಾಡಿ ವ ಬಾಡಿಗೆ ಭಂಡಿ 1ಕ್ಕೆ ಭರ್ತಿ ಆಗಿದ್ದರೆ	0	12	0
8	ಆರು ಎತ್ತುಗಳು ವಗೈರೆಗಳಿಂದ ಎಳೆಯಲ್ಪಟ್ಟ ಗಾಡಿ ವ ಬಾಡಿಗೆ ಭಂಡಿ 1ಕ್ಕೆ ಭರ್ತಿ ಇಲ್ಲದಿದ್ದರೆ	0	6	0
9	ನಾಲ್ಕು ಎತ್ತುಗಳು ವಗೈರೆಗಳಿಂದ ಎಳೆಯಲ್ಪಟ್ಟ ಗಾಡಿ ವ ಬಾಡಿಗೆ ಭಂಡಿ 1ಕ್ಕೆ ಭರ್ತಿಆಗಿದ್ದರೆ	0	8	0
10	ಡಿಟೋ ಡಿಟೋ ಭರ್ತಿಇಲ್ಲದಿದ್ದರೆ	0	4	0
11	ಎರಡು ಎತ್ತುಗಳಿಂದ, ಕೋಣಗಳಿಂದ, ಕುದುರೆಗಳಿಂದ, ಟಾಕಣಗಳಿಂದ, ಕತ್ತೆಗಳಿಂದ, ಹೇಸರು ಕತ್ತೆಗಳಿಂದ ಎಳೆಯಲ್ಪಟ್ಟ ಗಾಡಿ ಮತ್ತು ಬಾಡಿಗೆ ಭಂಡಿ 1ಕ್ಕೆ ಭರ್ತಿ ಆಗಿದ್ದರೆ	0	4	0
12	ಡಿಟೋ ಭರ್ತಿ ಇಲ್ಲದಿದ್ದರೆ	0	2	0
13	ಕೋಣಗಳು ಯಾ ಎತ್ತುಗಳು ರಾಸು 1ಕ್ಕೆ ಹೊರಿಸಲ್ಪಟ್ಟು ಇದ್ದರೆ	0	1	0
14	ಡಿಟೋ ಹೊರೆ ಇಲ್ಲದಿದ್ದರೆ	0	0	3
15	ಪ್ರತಿ ಆನೆಗೂ	1	8	0
16	ಪ್ರತಿ ಒಂಟೆಗೂ ಹೊರಿಸಲ್ಪಟ್ಟಿದ್ದರೆ	0	8	0
17	ಡಿಟೋ ಹೊರೆ ಇಲ್ಲದಿದ್ದರೆ	0	4	0
18	ಪ್ರತಿ ಕುದುರೆಗೂ ಹೊರಿಸಲ್ಪಟ್ಟಿದ್ದರೆ ಯಾ ಸವಾರಿ ಮಾಡಲ್ಪಡುತ್ತಿದ್ದರೆ	0	1	6
19	ಹೊರೆ ಇಲ್ಲದ ಯಾ ಹಿಡದುಕೊಂಡು ಹೋಗುವ ಪ್ರ 1 ಕುದುರೆಗೂ	0	0	9
20	ಪ್ರತಿ ತಟ್ಟು ಯಾ ಹೇಸರುಕತ್ತೆ ಹೊರೆ ಹೊರಿಸಿ ಇದ್ದರೆ ಯಾ ಸವಾರಿ ಮಾಡಲ್ಪಡುತ್ತಿದ್ದರೆ	0	0	9
21	ಪ್ರತಿ ತಟ್ಟು ಯಾ ಹೇಸರುಕತ್ತೆ ಹೊರೆ ಇಲ್ಲದ ಯಾ ಹಿಡಿದುಕೊಂಡು ಹೋಗಲ್ಪಡುವದಕ್ಕೆ	0	0	6
22	ಪ್ರತಿ ಕತ್ತೆಗೂ ಹೊರೆ,ಹೊರಿಸಿ ಇದ್ದರೆ ಯಾ ಸವಾರಿ ಮಾಡಲ್ಪಡುತ್ತಿದ್ದರೆ	0	0	6
23	ಹೊರೆ ಇಲ್ಲದೆ ಯಾ ಹಿಡಿದುಕೊಂಡು ಹೋಗಲ್ಪಡುವ ಪ್ರತಿ ಕತ್ತೆಗೂ	0	0	1
24	ಪ್ರತಿ ಕುರಿ, ಮೇಕೆ ಯಾ ಹಂದಿ	0	0	1
25	ಎಂಟು ಜೋಯಿಗಳ ವಡನೆ ಪ್ರತಿ ಡೋಲಿ, ಪಾಲಕಿ ಯಾ ಟಾಂಜಾನಿಗೂ	1	0	0
26	ಆರು ಜೋಯಿಗಳೊಡನೆ ಡಿಟೋ	0	12	0
27	ನಾಲ್ಕು ಜೋಯಿಗಳೊಡನೆ ಡಿಟೋ	0	8	0
28	ಇಬ್ಬರು ಜೋಯಿಗಳೊಡನೆ ಡಿಟೋ	0	4	0

ನಡದು ಬರುವ ಮಾರ್ಗಸ್ತರ ಮೇಲೆ ಟೋಲ್ ವಸೂಲ್ ಮಾಡತಕ್ಕದ್ದಲ್ಲ.

ಎ. ಕೃಷ್ಣಸ್ವಾಮಯ್ಯಂಗಾರ್,
ಡೆಪ್ಯೂಟಿ ಕಮ್ಮಿಷನರ್.

ಇಸ್ತಿಹಾರಿನಾಮೆ.

ತಾರೀಖು 24ನೇ ಮಾರ್ಚಿ ಸ್ ೧೮೯೬ನೇ ಇಸವಿ.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ,—ಚೀಲೂರು ತಾಲ್ಲೂಕು ದೊಡ್ಡಬೆಳ್ಳೋದು ಗ್ರಾಮದಲ್ಲಿ ಇರುವ ಇದರಿಂದ ನಮೂದು ಮಾಡಿರುವ ಜಮೀನಿಗೆ ಕಾಫೀ ಸಾಗುವಳಿಬಾಬ್ತಿಗಾಗಿ ದರಖಾಸ್ತು ಬಂದಿರೋದರಿಂದ ಸ್ ೧೮೯೬ನೇ ಇಸವಿ ಮೇ ತಾರೀಖು 18ನೇ ಸೋಮವಾರ ಹಗಲು 11 ಘಂಟೆಗೆ ಹಾಸನ ಡಿಸ್ಟ್ರಿಕ್ಟು ಡೆಪ್ಯೂಟಿ ಕಮ್ಮಿಷನರ್ ಸಾಹೆಬರವರ ಮಂಜೂರಾತಿಗೆ ಬಳಪಡಿಸಿ ಹಾಸನ ಡಿಸ್ಟ್ರಿಕ್ಟು ಜನರಲ್ ಅಸಿಸ್ಟೆಂಟ್ ಕಮ್ಮಿಷನರವರ ರೂಬರೂ ಚೀಲೂರು ಪೊಕ್ಕಾಮಿನಲ್ಲಿ, ಬಹಿರಂಗವಾದ ಹರಾಜು ಮೂಲಕ ಆವುಗಳು ವಿಕ್ರಯಿಸಲ್ಪಡುವವು.

305

2. ಮಾಮೂಲ್ ಪರತ್ತು ಗಳಿಗೆ ವಳಪಟ್ಟು ಬಹಿರಂಗವಾದ ಹರಾಜು ಮೂಲಕ ಸದರೀ ಲೀಲಾವ್ ನಡಿಯತಕ್ಕದ್ದು. ಎಕರೆ 1ಕ್ಕೆ 10 ರೂಪಾಯಿಗಳ ಮೇರೆ ಆಗುವ ಅಸ್ಸೆಸ್‌ಮೆಂಟ್ಸ್ ಯಾನೆ ನಿಯಮವಾದ ಸರ್ಕಾರ್ ಸವಾಲಿಗೆ ಮೇಲ್ಪಟ್ಟು ಖಾಯಿಷ್ ಮಾಡುವ ಆಬೈರ್ ಚಡದರಖಾಸ್ತುದಾರನಿಗೆ ಮೂರು ವಾರಗಳಿಂದ ಜಮ್ಮಿ ಹರಾಜನ್ನು ಖೈದ್ ಮಾಡೋಣಾಗುತ್ತದೆ. ಹರಾಜಿನಲ್ಲಿ ಆ ಜಮ್ಮಿ ದರಖಾಸ್ತುದಾರನಿಗೆ ಆಗುವ ಪಕ್ಷದಲ್ಲಿ ಆತನಿಂದ ಹಾಜರಾಗಿರುವ ನಿಯಮವಾದ ಸರ್ಕಾರ್ ಸವಾಲ್ ಮೊಬಲಗು (ಅಸ್ಸೆಸ್ಮೆಂಟ್ಸ್) ಪೈಕಿ ಯಾ ಚವಥಾ ಜಸ್ತೀ ಡಿಪಾಜಿಟ್ ಮೊಬಲಗನ್ನು ಹರಾಜು ಮೊಬಲಗಿನ ಮೇಲೆ ಶೇಕಡಾ 25 ರೂಪಾಯಿಗಳ ಮೇರೆ ಆಗುವ ಡಿಪಾಜಿಟ್ ಮೊಬಲಗು ಭರ್ತಿಗೆ ಜಮಾ ಹಿಡಿಯೋಣಾಗುತ್ತೆ. ಆದರೆ ಆ ಜಮ್ಮಿಯನ್ನು ಹರಾಜಿನಲ್ಲಿ ದರಖಾಸ್ತುದಾರನಲ್ಲದ ಇತರರ್‌ಯಾರಾದರೂ ಪಡದರೆ ದರಖಾಸ್ತುದಾರನ ಷುರೂ ಶೇವಣಿ ಮೊಬಲಗನ್ನು ವಾಪಸ್ ಮಾಡೋಣಾಗುತ್ತದೆ.

3. ಮೇಲ್ಕಂಡ ಅಸ್ಸೆಸ್ಮೆಂಟ್ಸ್‌ಯಾನೆ ನಿಯಮವಾದ ಸರಕಾರ್ ಸವಾಲ್ ಮೊಬಲಗಿನಲ್ಲಿ ಸರ್ವೆ ಖರ್ಚು ಮೊಬಲಗು ಮತ್ತು ಸರಕಾರಕ್ಕೇನೇ ಯಾವಾಗಲೂ ಇಟ್ಟುಕೊಳ್ಳಲ್ಪಟ್ಟಿರುವ ಸಂದಲ್ ವಿನಹ ಬಾಕಿಯಲ್ಲಾ ಮನ್ನಾ ಜಾತಿ ಮಗಳ ಮೇಲಿನ ಸರಕಾರದ ಹಕ್ಕು ಇವುಗಳು ಅಡಗಿರುತ್ತವೆ.

4. ಪರಾಜು ಮೊಬಲಗು ಪೈಕಿ ಶೇಕಡಾ 25 ರೂಪಾಯಿಗಳ ಮೇರೆ ಆಗುವ ಶೇವಣಿ ಮೊಬಲಗನ್ನು ಹರಾಜ್ ಖೈದಾದ ಪಡನೆಯೇ 2ನೇ ವ್ಯಸ್ಯಾದಲ್ಲಿ ನಮೂದಾಗುವ ಸಂದರ್ಭಾನುಸಾರ ಷುರೂ ಡಿಪಾಜಿಟ್ ಮೊಬಲಗು ಭರ್ತಿಗೆ ವಳಪಟ್ಟು ಆಬೈರ್ ಚಡದರಖಾಸ್ತುದಾರ ಕೊಡತಕ್ಕದ್ದು. ಮತ್ತು ಬಾಕಿ ಹಣವನ್ನು ಜ್ಯಾರಿಯಲ್ಲಿ ಇರುವ ನಿಬಂಧನೆಗಳಲ್ಲಿ ಯುಕ್ತವಾಗಿರುವಂತೆ ಹರಾಜಾದ ತಾರೀಖು ಲಾಗಾಯತು 15ನೇ ದಿವಸ ಸೂರ್ಯಾಸ್ತ ಮಯಕ್ಕೆ ಮುಂಜೆಯೇ ಆಬೈರ್ ಚಡದರಖಾಸ್ತುದಾರನು ಪಾವತಿ ಮಾಡತಕ್ಕದ್ದು. ಹಾಗೆ ಚಡದರಖಾಸ್ತುದಾರನು ಡಿಪಾಜಿಟ್ ಅಥವಾ ವಿಕ್ರಯದ ಬಾಕಿ ಮೊಬಲಗನ್ನು ಕೊಡದೆ ತಪ್ಪಿದರೆ ಖರ್ಚು ಜಾತಾ ಉಳಿಯುವ ಡಿಪಾಜಿಟ್ ಮೊಬಲಗನ್ನು ಸರಕಾರಕ್ಕೆ ದಂಡವಾಗಿ ತೆಗದುಕೊಂಡು ಅವನ ಖರ್ಚಿನಿಂದಲೂ ಅವನಿಗೆ ನಷ್ಟಕರವಾಗಿಯೂ ಸದರೀ ಜಮ್ಮಿ ಪುನಃ ಹರಾಜ್ ಮಾಡಲ್ಪಡುವದು. ಎರಡನೇ ಹರಾಜಿನಲ್ಲಿ ಸಂಭವಿಸುವ ನಷ್ಟಕ್ಕೆ ಅವನು ಗುರಿಯಾಗಿರಬೇಕು. ಆದರೆ ಜಾಸ್ತಿ ಏನಾದರೂ ಹುಟ್ಟಿದರೆ ಅದಕ್ಕೆ ಅವನಿಗೆ ಯಾವ ಹಕ್ಕೂ ಇರಲಾರದು. ದುಸರೇ ಹರಾಜಿನಲ್ಲಿ ಉತ್ಪತ್ತಿಯಾಗುವ ಮೊಬಲಗು ಮೊದಲು ಹರಾಜಿನ ಸವಾಲಿಗಿಂತಾ ಕಮ್ಮಿಯಾಗುವ ಪಕ್ಷಕ್ಕೆ ಕಮ್ಮಿ ಮೊಬಲಗನ್ನು ರೆವಿನ್ಯೂ ಬಾಕಿಯಂತೆ ಅವನಿಂದ ವಸೂಲ್ ಮಾಡಲ್ಪಡುತ್ತೆ.

5. ಈ ನಿಬಂಧನೆಗಳಿಗೆ ವಳಪಟ್ಟು ಹರಾಜಾದ ಜಮ್ಮಿನನ್ನು ಷುರೂ ಮೂರು ಸಾಲ್ ಆಕಾರವಿಲ್ಲದೆ ಮುಫತ್ತು, 4ನೇ ೆನೇ ಸಾಲ್ ಅರ್ಧ ಆಕಾರ, 6ನೇ ಸಾಲ್ ಲಾಗಾಯತು ಮತ್ತು ಅನಂತರ ಸಹ ಪೂರಾ ಆಕಾರ. ಈ ಮೇರೆ ಕೊಟ್ಟುಕೊಂಡು ಅನುಭವಿಸತಕ್ಕದ್ದು. ಈ ರಿಯಾಯತ್ ಕೊಡುವದಕ್ಕೆ ಮುಂಚೆ ಜಮ್ಮಿನಿನಲ್ಲಿ ಇರುವ ಸಾಗುವಳಿ ಲಾಯಖ್ ಪ್ರದೇಶವನ್ನು ಸಾಗುವಳಿಗೆ ತರಲು ಪ್ರಾಮಾಣಿಕವಾದ ಪ್ರಯತ್ನ ಮಾಡದೆ ಅದರಲ್ಲಿ ಇರುವ ನಾಟುವನ್ನು ಕತರಾಯಿಸಿಕೊಂಡೇ ಆಗಲಿ ಅದರಲ್ಲಿ ಯಾವ ಭಾಗವನ್ನಾದರೂ ಪೈಲ್ ಮಾಡಿಯೇ ಆಗಲಿ ಸದರೀ ಜಮ್ಮಿನಿಗೆ ರಿಯಾಯತಿ ಅವಧಿಯಲ್ಲಿ ರಾಜೀನಾಮೆ ಕೊಡುವ ಪಕ್ಷಕ್ಕೆ ಷುರೂ ಸಾಲ್ ಲಾಗಾಯತು ಪೂರಾ ಆಕಾರ ಕೊಡಲುಳ್ಳವನೆಂತ ಬರಹ ಮೂಲಕವಾಗಿ ಹರಾಜುದಾರನು ಮುಚ್ಚಳಿಕೆಯಿಂದ ಬದ್ಧನಾಗಬೇಕು.

6. ಈ ನಂಬರಿನಲ್ಲಿರುವ ಸುಮಾರು 1—2 ವಿಸ್ತೀರ್ಣದ ಯರಡು ದಾರಿಗಳು ಇವೆ, ಇವುಗಳನ್ನು ಹರಾಜಿನಲ್ಲಿ ಪಡಿಯುವ ಚಡದರಖಾಸ್ತುದಾರನು ಅಡ್ಡಿಪಡಿಸಕೂಡದು. ಅವುಗಳನ್ನು ಜನೋಪಯುಕ್ತಕ್ಕಾಗಿ ಉಳಿಕೆಕೊಂಡಿದೆ.

ಸರ್ವೆ ನಂಬರ್.	ದರಖಾಸ್ತುದಾರನ ಹೆಸರು.	ಜಮ್ಮಿ ಹೆಸರು ಮತ್ತು ಇರತಕ್ಕ ಸ್ಥಳ.	ಚತುರ್ಗಡಿ.	ದರಖಾಸ್ತು ಜಮ್ಮಿನಿನ		ಷರಾ.
				ವಿಸ್ತೀರ್ಣ	ಆಕಾರ	
2ನೆ ಪೈಕಿ ನಂಬರ್ 172	ಮಸ್ಟರ್ ಜೆ. ಜೆ. ಎಚ್. ಕ್ಯಾಪರ್ಡಯನವರು.	ದೊಡ್ಡಬಿಕ್ಕೋಡು ಗ್ರಾಮ.	ಉತ್ತರಕ್ಕೆ—ಸರ್ವೆ ನಂಬರು 7—8—9—10 ಮತ್ತು ಮಠ ದಕ್ಷಿಣಕ್ಕೆ—ಸರ್ವೆ 2ನೇ ನಂಬರು ಪೈಕಿ ಪೂರ್ವಕ್ಕೆ—ಸರ್ವೆ ನಂಬರು 88—1 ಪ್ಶ್ಚಿಮಕ್ಕೆ—ಸರ್ವೆ 2ನೇ ನಂಬರು ಪೈಕಿ	ನ. ಗುಂ. 103—22 ಈ ನಂಬರಿನಲ್ಲಿರುವ 2 ದಾರಿಗಳು ಜಮ್ಮಿನಿಯ		ಖಾಯಂದರ—ಎಕರೆ 1ಕ್ಕೆ 1—8—0 ಹಂಗಾಮಿ ದರ—ಡಿಟೋ 1—0—0 ಹರಾಜಿನಲ್ಲಿ ಪಡಿಯುವವರ ಯಿಷ್ಟ ಪ್ರಕಾರ ಕೆ ದಾದು ಡಾಖಲ್ಮಾಡಲ್ಪಡುವದು.

ತಿಳುವಳಿಕೆ-ಷರಾ,—ಒಂದು ಸರ್ವೇ ನಂಬರು ಪೈಕಿ ಕೆಲವು ಜಾಗಾಕ್ಕೆ ದರಖಾಸ್ತು ಬಂದು ಕಚ್ಚಾ ಅಳತೆ ಪ್ರಕಾರ ಅಂದಾಜು ಎಕರೆ ಮೇಲೆ ಅಸ್ಸೆಸ್ಮೆಂಟ್ಸ್ ವಸೂಲಾದ್ದರಲ್ಲಿ ಕರಾರುವಾಕಾ ಮೋಜಣೇ ಎಕರಿಗೆ ಗಣನೀಯವಾದಷ್ಟು ಕಮ್ಮಿ ಜಾಸ್ತೀ ಆದರೆ ಜಾಸ್ತೀ ಎಕರೆ ಸಂಬಂಧ ಅಸ್ಸೆಸ್ಮೆಂಟ್ಸ್ ವಸೂಲೀ ಕೊಡುವದಕ್ಕೇ, ಆಗಲಿ ಕಮ್ಮಿ ಎಕರೆ ಸಂಬಂಧ ವಾಪಸ್ ಪಡಿಯುವದಕ್ಕೇ ಆಗಲಿ ಜಮ್ಮಿ ಹಿಡುವಳಿದಾರನು ಬದ್ಧವರ್ಹನಾಗಿರಬೇಕು.

ಎ. ಕೃಷ್ಣಸ್ವಾಮಯ್ಯಂಗಾರ್,
ಡಿಪ್ಯೂಟಿ ಕಮ್ಮಿಷನರ್.